# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

7

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ - ಉ.ಸ. ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ    ದಿನಾಂಕ : DATE : 30/1/2021

### 29ಕ್ಕೆ ಉಪಸಭಾಪತಿ ಚುನಾವಣೆ

ಬೆಂಗಳೂರು: ಎಸ್.ಎಲ್.ಧರ್ಮೇಗೌಡ ನಿಧನದಿಂದ ತೆರವಾಗಿರುವ ವಿಧಾನ ಪರಿಷತ್ ಉಪ ಸಭಾಪತಿ ಸ್ಥಾನಕ್ಕೆ ಜ.29ರಂದು ಚುನಾವಣೆ ನಿಗದಿಪಡಿಸಿ ಸಭಾಪತಿ ಆದೇಶಿಸಿದ್ದಾರೆ. ಜ.28ರ ಮಧ್ಯಾಹ್ನ 3 ಗಂಟೆ ತನಕ ನಾಮಪತ್ರ ಸಲ್ಲಿಸಬಹುದಾಗಿದೆ ಎಂದು ಪರಿಷತ್ ಕಾರ್ಯದರ್ಶಿ ಮಹಾಲಕ್ಷ್ಮಿ ಅವರು ಹೊರಡಿಸಿರುವ ಅಧಿಸೂಚನೆಯಲ್ಲಿ ತಿಳಿಸಿದ್ದಾರೆ. ಉಪ ಸಭಾಪತಿ ಸ್ಥಾನಕ್ಕೆ ಜೆಡಿಎಸ್ ಮತ್ತು ಬಿಜೆಪಿ ನಡುವೆ ಹೊಂದಾಣಿಕೆ ಆಗಲಿದ್ದು, ಈ ಹುದ್ದೆಯನ್ನು ಜೆಡಿಎಸ್‌ಗೆ ಬಿಟ್ಟುಕೊಡಲು ತೀರ್ಮಾನಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಒಂದು ವೇಳೆ ಸಭಾಪತಿ ಹುದ್ದೆಯೇ ಬೇಕೆಂದು ಜೆಡಿಎಸ್ ಪಟ್ಟು ಹಿಡಿದರೆ, ರಾಜಕೀಯ ವ್ಯತ್ಯಾಸಗಳು ಆಗುವ ಸಾಧ್ಯತೆಯನ್ನ ಅಲ್ಲಗಳೆಯಲಾಗದು.